(60)

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ವಾರ್ಡ್ ಮಟ್ಟದ ಸಾರ್ವಜನಿಕ ಕಾಮಗಾರಿ ಸ್ಥಾಯಿ ಸಮಿತಿಯ, ದಿನಾಂಕ:28/01/-2019ರ ನಡವಳಿಗಳು

ವಿಷಯದ ಸಂಖ್ಯೆ: ವಾಕಾಸ್ಥಾಸ/274/2018-19

ಟಿಪ್ಪಣಿಯಲ್ಲಿ ವಿವರಿಸಿರುವಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಯಲಹಂಕ ವಲಯದ ಕಾರ್ಯಪಾಲಕ ಅಭಿಯಂತರರು (ಬ್ಯಾಟರಾಯನಪುರ ವಿಭಾಗ) ರವರ ವ್ಯಾಪ್ತಿಯ ವಾರ್ಡ್-05 ಕ್ಕೆ ಲೆಕ್ಕ ಶೀರ್ಷಿಕೆ ಪಿ-1771 ಅಡಿ ಪ್ರಸ್ತಾಪಿಸಿದ ಕಾಮಗಾರಿಗಳ ಕ್ರಿಯಾಯೋಜನೆಗೆ ಸ್ಥಾಯಿ ಸಮಿತಿ ನಡವಳಿಗೆ ಸಂಖ್ಯೆ:ವಾಕಾಸ್ಥಾಸ/690/2017-18, ದಿನಾಂಕ:03-01-2018ರಲ್ಲಿ ಸಮಿತಿಯು ಅನುಮೋದನೆ ನೀಡಿರುತ್ತಾರೆ. ಅನುಮೋದಿತ ಕಾಮಗಾರಿಯಲ್ಲಿ ಸದರಿ ವಾರ್ಡ್‌ನ ರಸ್ತೆ ಗುಂಡಿ ಮುಚ್ಚುವ ಕಾಮಗಾರಿಯ ವಿವರಗಳು ಈ ಕೆಳಕಂಡಂತಿರುತ್ತದೆ.

ಕ್ರ.ಸ	ಕಾಮಗಾರಿ ಹೆಸರು	ಪಿ.ಕೋಡ್	ಜಾಬ್ ಸಂಖ್ಯೆ	ಅಂದಾಜು ಮೊತ್ತ ರೂ ಲಕ್ಷಗಳಲ್ಲಿ
1	Pothole filling to road in ward No.05 (jakkur) Bytaranapura sub division	1771	05-18-000068	30.00

ಮೇಲ್ಕಾಣಿಸಿದ ಕಾಮಗಾರಿಯನ್ನು ಘನ ಉಚ್ಚ ನ್ಯಾಯಲಯದಲ್ಲಿ ಬೆಂಗಳೂರು ನಗರದ ವ್ಯಾಪ್ತಿಯಲ್ಲಿ ಬಿದ್ದಿರುವ ರಸ್ತೆ ಗುಂಡಿಗಳ ಬಗ್ಗೆ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ವಿಚಾರಣೆ ನಡೆಯುತ್ತಿದ್ದು, ಘನ ನ್ಯಾಯಾಲಯವು ದಿನಾಂಕ:19-10-2018 ಮತ್ತು 20-10-2018 ರಂದು ಸುಧೀರ್ಘವಾಗಿ ವಿಚಾರಣೆ ನಡೆಸಿ ಘನ ನ್ಯಾಯಾಲಯವು ಎಲ್ಲಾ 198 ವಾರ್ಡ್‌ಗಳಲ್ಲಿ ಹಾಲಿ ಇರುವ ಮತ್ತು ಹೊಸದಾಗಿ ಗುರುತಿಸಿರುವ ರಸ್ತೆ ಗುಂಡಿಗಳನ್ನು ಸಂಪೂರ್ಣವಾಗಿ ಮುಚ್ಚಲು ಕ್ರಮವಹಿಸಿ ಆದೇಶ ನೀಡಿರುತ್ತಾರೆ. ಮುಂದುವರೆದಂತೆ ವಿಶೇಷ ಆಯುಕ್ತರು (ಯೋಜನೆ)ರವರ ಕಛೇರಿ ಸಂಖ್ಯೆ:ವಿ.ಆ.(ಯೋ)ಪಿ.ಆರ್/1562/2018-19 ದಿನಾಂಕ:20-09-2018 ರ ಅಡಿಯಲ್ಲಿ ಆಂತರಿಕ ಕಚೇರಿ ಟಿಪ್ಪಣಿ ಹೊರಡಿಸಿ ಪಾಲಿಕೆ ಪ್ರತಿ ವಾರ್ಡ್ ವ್ಯಾಪ್ತಿಯಲ್ಲಿ ಬರುವ ರಸ್ತೆಗಳಲ್ಲಿ ಹಾಲಿ ಇರುವ ಮತ್ತು ಹೊಸದಾಗಿ ಗುರುತಿಸಿರುವ ರಸ್ತೆ ಗುಂಡಿಗಳನ್ನು ಸಂಪೂರ್ಣವಾಗಿ ಮುಚ್ಚಿ ಹಾಗು ಯಾವುದೇ ಗುಂಡಿ ಮುಚ್ಚುವ ಕಾರ್ಯವು ಬಾಕಿ ಇರುವುದಿಲ್ಲವೆಂದು ಸಂಬಂಧಪಟ್ಟ ಕಾರ್ಯಪಾಲಕ ಅಭಿಯಂತರರು ಧೃಡೀಕರಿಸಿ ಪತ್ರ ನೀಡಲು ಸೂಚಿಸಲಾಗಿರುತ್ತದೆ.

ಘನ ಉಚ್ಚ ನ್ಯಾಯಾಲಯದ ಆದೇಶದಂತೆ ಹಾಗೂ ಮುಖ್ಯ ಅಭಿಯಂತರರು (ಯಲಹಂಕ) ರವರ ಶಿಫಾರಸ್ಸಿನಂತೆ ಮೇಲ್ಕಂಡ ಕಾಮಗಾರಿಯನ್ನು ಕರ್ನಾಟಕ ಪಾರದರ್ಶಕ ಕಾಯ್ದೆ ಅಡಿ ಕಲಂ 4(ಜಿ)ಅಡಿ ವಿನಾಯಿತಿ ನಿರೀಕ್ಷಿಸಿ ಸದರಿ ಕಾಮಗಾರಿಯನ್ನು ಮೆ:ಕೆ.ಆರ್.ಐ.ಡಿ.ಎಲ್. ಸಂಸ್ಥೆರವರಿಗೆ ವಹಿಸಿ ಕಾಮಗಾರಿಯನ್ನು ಪೂರ್ಣಗೊಳಿಸಿರುವ ಕ್ರಮವನ್ನು ಸ್ಥಿರೀಕರಿಸಲು ಕೋರಿದ್ದು, ಸದರಿ ಪ್ರಸ್ತಾವನೆಗೆ ಮಾನ್ಯ ಆಯುಕ್ತರು ಒಪ್ಪಿಗೆ ನೀಡಿರುತ್ತಾರೆ. ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ (ಸಂಗ್ರಹಣೆ ಕೋಶ) ಆದೇಶ ಸಂಖ್ಯೆ:ಆಇ/344/ವೆಚ್ಚ-12/2018, ದಿನಾಂಕ:06-04-2018 ರಲ್ಲಿ ಸರ್ಕಾರದ ಇಲಾಖೆಗಳು ಮತ್ತು ಇತರೆ ಸಂಗ್ರಹಣಾ ಸಂಸ್ಥೆಗಳು ಕರ್ನಾಟಕ ಇನ್‌ಪ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಲಿಮಿಟೆಡ್ (ಕೆಆರ್‌ಐಡಿಎಲ್- ಹಿಂದಿನ ಕೆ.ಎಲ್.ಎ.ಸಿ) ಸಂಸ್ಥೆಯ ಮೂಲಕ ಗರಿಷ್ಟ ರೂ.2.00 ಕೋಟಿಗಳ ಮಿತಿಯಲ್ಲಿ ಕೈಗೊಳ್ಳಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ರ ಕಲಂ 4(ಜಿ) ರಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ 2018-19ನೇ ಸಾಲಿಗೆ ಪಾರದರ್ಶಕತೆ ಕಾಯ್ದೆಯಿಂದ ವಿನಾಯಿತಿ ನೀಡಿದೆ. ಈ ವಿಚಾರದಲ್ಲಿ ಮಾನ್ಯ ಆಯುಕ್ತರು ಕಛೇರಿ ಟಿಪ್ಪಣಿ ಸಂಖ್ಯೆ:1075/2018-19, ದಿನಾಂಕ;11-07-2018ರಂತೆ ಪಾಲಿಕೆಯ ವತಿಯಿಂದ 2018-19ನೇ ಸಾಲಿನ ಪಾಲಿಕೆಯ ಆಯವ್ಯಯದಲ್ಲಿ ನಿಗದಿಪಡಿಸಿದ ಅನುದಾನದ ಕಾಮಗಾರಿಗಳನ್ನು ಸಂಬಂಧಪಟ್ಟ ಸ್ಥಾಯಿ ಸಮಿತಿ ಅನುಮೋದನೆ ಪಡೆದು ತದನಂತರ ಸರ್ಕಾರದ ಆರ್ಥಿಕ ಇಲಾಖೆಯವರು ನೀಡಿರುವ ಷರತ್ತುಗಳಿಗೆ ನಿಯಮಾನುಸಾರವಾಗಿ ಕ್ರಮವಹಿಸಿ ಮೆ:ಕೆ.ಆರ್.ಐ.ಡಿ.ಎಲ್. ಮುಖಾಂತರ ಅನುಷ್ಠಾನಗೊಳಿಸಲು ಸೂಚಿಸಲಾಗಿದೆ.

(57)

ಈ ಹಿನ್ನೆಲೆಯಲ್ಲಿ ಮಾನ್ಯ ಆಯುಕ್ತರವರ ಆದೇಶದಂತೆ, ವಾರ್ಡ್–05 ರಲ್ಲಿ ಮೇಲ್ಕಾಣಿಸಿದಂತೆ ಪ್ರಸ್ತಾಪಿಸಿದ ಕಾಮಗಾರಿಯ ಅಂದಾಜು ಮೊತ್ತವಾದ ರೂ:30.00 ಲಕ್ಷಗಳ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಮೆ:ಕೆ.ಆರ್.ಐ.ಡಿ.ಎಲ್. ಸಂಸ್ಥೆಗೆ ವಹಿಸಿ ಕಾಮಗಾರಿಯ ಪೂರ್ಣಗೊಳಿಸಿರುವ ಕ್ರಮವನ್ನು ಸ್ಥಿರೀಕರಿಸಲು ಅನುಮೋದನೆ ಕೋರಿ ಸಮಿತಿಯ ಮುಂದೆ ಮಂಡಿಸಲು ಮಾನ್ಯ ಆಯುಕ್ತರು ಸಂಖ್ಯೆ:ಪಿ.ಎಸ್.ಆರ್.(ಜಿ)3945/2018–19, ದಿನಾಂಕ:05–11–2018 ರಂತೆ ಅನುಮೋದಿಸಿರುವ ಮೇರೆಗೆ ಪ್ರಧಾನ ಅಭಿಯಂತರರವರ ಕಛೇರಿ ಸಂಖ್ಯೆ:4537/2018–19, ದಿ:24–11–2018 ರಂತೆ ವಾರ್ಡ್ ಮಟ್ಟದ ಸಾರ್ವಜನಿಕ ಕಾಮಗಾರಿ ಸ್ಥಾಯಿ ಸಮಿತಿ ಮುಂದೆ ಮಂಡಿಸಿರುವ ಪ್ರಧಾನ ಅಭಿಯಂತರರವರ ದಿನಾಂಕ:29–11–2018ರ ಟಿಪ್ಪಣಿ.

ನಿರ್ಣಯ :- ಮುಂದುಡಿದೆ

ವಾರ್ಡ್‌ಮಟ್ಟದ ಸಾರ್ವಜನಿಕ ಕಾಮಗಾರಿ ಸ್ಥಾಯಿ ಸಮಿತಿ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ದಿ|19|02|19 ರ ಸಭೆಯ ನಿರ್ಣಯ :-

ನಿರ್ಣಯ :- ಪ್ರಧಾನ ಅಭಿಯಂತರರವರ ಪತ್ರ ದಿ|27|11|18ರ ಉತ್ತರಿಸಲಾಗುವುದು ಮುಂದಿನ ಸಭೆಯಲ್ಲಿ ತೀರ್ಮಾನಿಸಿದೆ.

ವಾರ್ಡ್‌ಮಟ್ಟದ ಸಾರ್ವಜನಿಕ ಕಾಮಗಾರಿ ಸ್ಥಾಯಿ ಸಮಿತಿ
ನಿರ್ಣಯದ ಪ್ರಕಾರ ಸಹಿ/- ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

ಕ್ರ ಸಂ	ಶ್ರೀಯುತರ ಹೆಸರು	ಪದನಾಮ	ನಿರ್ಣಯದ ಪ್ರಕಾರ ಸಹಿ
1	ಉಮೇಸಲ್ಮಾ	ಅಧ್ಯಕ್ಷರು	
2	ದೀಪಿಕಾ.ಎಲ್.ಮಂಜುನಾಥರೆಡ್ಡಿ	ಸದಸ್ಯರು	Deepika. L. Manjunatha Reddy.
3	ಎಂ.ಶಾಮಲ	ಸದಸ್ಯರು	
4	ಇಂದಿರಾ.ಜಿ	ಸದಸ್ಯರು	C Indira
5	ಜಯಲಕ್ಷ್ಮಮ್ಮ ಪಿಳ್ಳಪ್ಪ	ಸದಸ್ಯರು	
6	ಶ್ರೀಲತ ಸಿ.ಜಿ.ಗೋಪಿನಾಥರಾಜು	ಸದಸ್ಯರು	Sri Latha
7	ಕೆ.ದೇವದಾಸ	ಸದಸ್ಯರು	
8	ನೇತ್ರಾವತಿ ಕೃಷ್ಣೇಗೌಡ	ಸದಸ್ಯರು	Nethravathi
9	ಶಿಲ್ಪ ಅಭಿಲಾಶ್	ಸದಸ್ಯರು	
10	ಎನ್.ಮಂಜುನಾಥ್	ಸದಸ್ಯರು	N. Manjunath
11	ಆರ್.ಪದ್ಮಾವತಿ ಅಮರನಾಥ್	ಸದಸ್ಯರು	Padmavathi. R

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ವಾರ್ಡ್‌ವಾರು ಕಾಮಗಾರಿ ಸ್ಥಾಯಿ ಸಮಿತಿಗೆ ಮಂಡಿಸಲಾಗಿರುವ ಟಿಪ್ಪಣಿ

ವಿಷಯ:–2017–18 ನೇ ಸಾಲಿನ ಆಯವ್ಯಯ ವಲಯದ ವಾರ್ಡ್ ಸಂಖ್ಯೆ:05 (ಜಕ್ಕೂರ್) ಬ್ಯಾಟರಾಯನಪುರ ವಿಭಾಗ ವ್ಯಾಪ್ತಿಯಲ್ಲಿ ಲೆಕ್ಕ ಶೀರ್ಷಿಕೆ ಪಿ–1771 **(POW- Zonal Works)** ಅಡಿ ಪ್ರಸ್ತಾಪಿಸಿದ ತುರ್ತು ಕಾಮಗಾರಿಯಾದ ರಸ್ತೆ ಗುಂಡಿ ಮುಚ್ಚುವ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಮೇ॥ಕೆ.ಆರ್.ಐ.ಡಿ.ಎಲ್ ಸಂಸ್ಥೆರವರಿಗೆ ವಹಿಸಿಕೊಡುವ ಬಗ್ಗೆ.

ಉಲ್ಲೇಖ:–**(1)** ಸ್ಥಾಯಿ ಸಮಿತಿ ನಡುವಳಿಗಳ ಸಂಖ್ಯೆ:ವಾಕಾಸ್ಥಾಸ/690/2017–18, ದಿ:03–01–2018

(2)ವಿಶೇಷ ಆಯುಕ್ತರು (ಯೋಜನೆ) ರವರ ಕಛೇರಿ ಆದೇಶ ಸಂಖ್ಯೆ:ವಿ.ಆ.(ಯೋ)/ಪಿ.ಆರ್/1562/2018–19, ದಿ:20–09–2018

(3) ಮಾನ್ಯ ಆಯುಕ್ತರು ರವರ ಆದೇಶ ಸಂ:ಪಿಎಸ್‌ಆರ್(ಜಿ)/ಪಿಆರ್/3945/18–19 ದಿ:05–11–2018

* * * *

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ದಕ್ಷಿಣ ವಲಯದ ಕಾ.ಪಾ.ಅ (ಬ್ಯಾಟರಾಯನಪುರ ವಿಭಾಗ) ರವರ ವ್ಯಾಪ್ತಿಯ ಸಂಖ್ಯೆ:05 (ಜಕ್ಕೂರ್) ಲೆಕ್ಕ ಶೀರ್ಷಿಕೆ ಪಿ–1771 **(POW- Zonal Works)** ಅಡಿ ಪ್ರಸ್ತಾಪಿಸಿದ ಕಾಮಗಾರಿಯ ಕ್ರಿಯಾ ಯೋಜನೆಗೆ ಮೇಲ್ಕಂಡ ಉಲ್ಲೇಖ (1) ರಲ್ಲಿ ವಾರ್ಡ್ ಮಟ್ಟದ ಕಾಮಗಾರಿ ಸ್ಥಾಯಿ ಸಮಿತಿಯವರು ಅನುಮೋದನೆ ನೀಡಿರುತ್ತಾರೆ. ಅನುಮೋದಿತ ಕಾಮಗಾರಿಯಲ್ಲಿ ಸದರಿ ವಾರ್ಡ್‌ನ ರಸ್ತೆ ಗುಂಡಿ ಮುಚ್ಚುವರ ಕಾಮಗಾರಿಯ ವಿವರಗಳು ಈ ಕೆಳಕಂಡಂತಿರುತ್ತದೆ.

Sl No	Name of work	Head of A/c	Job Code No	Est Cost (Rs. in Lakhs)
1	Pothole filling to road in ward no.05(Jakkur), Byatrayanapura sub-division	P-1771	05-18-000068	30.00

ಮೇಲ್ಕಾಣಿಸಿದ ಕಾಮಗಾರಿಯನ್ನು ಘನ ಉಚ್ಚ ನ್ಯಾಯಾಲಯದಲ್ಲಿ ಬೆಂಗಳೂರು ನಗರದ ವ್ಯಾಪ್ತಿಯಲ್ಲಿ ಬಿದ್ದಿರುವ ರಸ್ತೆ ಗುಂಡಿಗಳ ಬಗ್ಗೆ ಸಾರ್ವಜನಿಕರ ಹಿತಾಸಕ್ತಿ ಅರ್ಜಿಯ ವಿಚಾರಣೆ ನಡೆಯುತ್ತಿದ್ದು, ಘನ ನ್ಯಾಯಾಲಯವು ದಿ:19–10–2018 ಮತ್ತು 20–10–2018 ರಂದು ಸುಧೀರ್ಘವಾಗಿ ವಿಚಾರಣೆ ನಡೆಸಿ ಘನ ನ್ಯಾಯಾಲಯವು ಎಲ್ಲಾ 198 ವಾರ್ಡ್‌ಗಳಲ್ಲಿ ಹಾಲಿ ಇರುವ ಮತ್ತು ಹೊಸದಾಗಿ ಗುರುತಿಸಿರುವ ರಸ್ತೆ ಗುಂಡಿಗಳನ್ನು ಸಂಪೂರ್ಣವಾಗಿ ಮುಚ್ಚಲು ಕ್ರಮವಹಿಸಲು ಆದೇಶ ನೀಡಿರುತ್ತಾರೆ. ಮುಂದುವರೆದಂತೆ ಮೇಲ್ಕಂಡ ಉಲ್ಲೇಖ (2) ರ ಅಡಿಯಲ್ಲಿ ಈ ಕಛೇರಿಯಿಂದ ಆಂತರಿಕ ಕಛೇರಿ ಟಿಪ್ಪಣಿ ಹೊರಡಿಸಿ ಪಾಲಿಕೆ ಪ್ರತಿ ವಾರ್ಡ್ ವ್ಯಾಪ್ತಿಯಲ್ಲಿ ಬರುವ ರಸ್ತೆಗಳಲ್ಲಿ ಹಾಲಿ ಇರುವ ಮತ್ತು ಹೊಸದಾಗಿ ಗುರುತಿಸಿರುವ ರಸ್ತೆ ಗುಂಡಿಗಳನ್ನು ಸಂಪೂರ್ಣವಾಗಿ ಮುಚ್ಚಿ ಹಾಗೂ ಯಾವುದೇ ಗುಂಡಿ ಮುಚ್ಚುವ ಕಾರ್ಯವು ಬಾಕಿ ಇರುವುದಿಲ್ಲವೆಂದು ಸಂಬಂಧಪಟ್ಟ ಕಾರ್ಯಪಾಲಕ ಅಭಿಯಂತ್ರರರು ರವರು ದೃಢೀಕರಣ ಪತ್ರ ನೀಡಲು ಸೂಚಿಸಲಾಗಿರುತ್ತದೆ.

ಘನ ಉಚ್ಚ ನ್ಯಾಯಾಲಯದ ಆದೇಶದಂತೆ ಹಾಗೂ ಮುಖ್ಯ ಅಭಿಯಂತರರು (ದಕ್ಷಿಣ) ರವರ ಶಿಫಾರಸ್ಸಿನಂತೆ ಮೇಲ್ಕಂಡ ಕಾಮಗಾರಿಯನ್ನು ಕರ್ನಾಟಕ ಪಾರದರ್ಶಕ ಕಾಯ್ದೆ ಅಡಿ ಕಲಂ 4(ಜಿ) ಅಡಿ ವಿನಾಯಿತಿ ನಿರೀಕ್ಷಿಸಿ ಸದರಿ ಕಾಮಗಾರಿಯನ್ನು ಮೆ॥ಕೆ.ಆರ್.ಐ.ಡಿ.ಎಲ್ ಸಂಸ್ಥೆರವರಿಗೆ ವಹಿಸಿ ಕಾಮಗಾರಿಯನ್ನು ಪೂರ್ಣಗೊಳಿಸಿರುವ ಕ್ರಮವನ್ನು ಸ್ಥಿರೀಕರಿಸಲು ಕೋರಿದ್ದು, ಸದರಿ ಪ್ರಸ್ತಾವನೆಗೆ ಮೇಲ್ಕಂಡ ಉಲ್ಲೇಖದಡಿಯಲ್ಲಿ ಮಾನ್ಯ ಆಯುಕ್ತರು ರವರು ಒಪ್ಪಿಗೆ ನೀಡಿರುತ್ತಾರೆ. ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ (ಸಂಗ್ರಹಣ ಕೋಶ) ಆದೇಶ ಸಂಖ್ಯೆ:ಆಇ/344/ವೆಚ್ಚ–12/2018, ದಿನಾಂಕ: 06–04–2018 ರಲ್ಲಿ ಸರ್ಕಾರದ ಇಲಾಖೆಗಳು ಮತ್ತು ಇತರೆ ಸಂಗ್ರಹಣಾ ಸಂಸ್ಥೆಗಳು ಕರ್ನಾಟಕ ಇನ್‌ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಲಿಮಿಟೆಡ್ (ಕೆ.ಆರ್.ಐ.ಡಿ.ಎಲ್.– ಹಿಂದಿನ ಕೆ.ಎಲ್.ಎ.ಸಿ.) ಸಂಸ್ಥೆಯ ಮೂಲಕ ಗರಿಷ್ಟ ರೂ.2.00 ಕೋಟಿಗಳ ಮಿತಿಯಲ್ಲಿ ಕೈಗೊಳ್ಳಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ –

1999ರ ಕಲಂ 4(ಜಿ) ರಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ 2018-19ನೇ ಸಾಲಿಗೆ ಪಾರದರ್ಶಕತೆ ಕಾಯ್ದೆಯಿಂದ ವಿನಾಯಿತಿ ನೀಡಿದೆ. ಈ ವಿಚಾರದಲ್ಲಿ ಮಾನ್ಯ ಆಯುಕ್ತರು ರವರ ಕಛೇರಿ ಟಿಪ್ಪಣಿ ಸಂಖ್ಯೆ:-1075/18-19, ದಿ:11-07-2018 ರಂತೆ ಪಾಲಿಕೆಯ ವತಿಯಿಂದ 2018-19ನೇ ಸಾಲಿನ ಪಾಲಿಕೆಯ ಆಯವ್ಯಯದಲ್ಲಿ ನಿಗಧಿ ಪಡಿಸಿದ ಅನುದಾನದ ಕಾಮಗಾರಿಗಳನ್ನು ಸಂಬಂಧಪಟ್ಟ ಸ್ಥಾಯಿ ಸಮಿತಿ ಅನುಮೋದನೆ ಪಡೆದು ತದನಂತರ ಸರ್ಕಾರದ ಆರ್ಥಿಕ ಇಲಾಖೆಯವರು ನೀಡಿರುವ ಷರತ್ತುಗಳಿಗೆ ನಿಯಮಾನುಸಾರವಾಗಿ ಕ್ರಮವಹಿಸಿ ಮೆ॥ಕೆ.ಆರ್.ಐ.ಡಿ.ಎಲ್ ಮುಖಾಂತರ ಅನುಷ್ಠಾನಗೊಳಿಸಲು ಸೂಚಿಸಲಾಗಿದೆ.

ಈ ಹಿನ್ನಲೆಯಲ್ಲಿ ಮಾನ್ಯ ಆಯುಕ್ತರವರ ಆದೇಶದಂತೆ, ಈ ಕೆಳಕಂಡ ಅಂಶಕ್ಕೆ ಸೂಕ್ತ ನಿರ್ಣಯ ಕೋರಿ ಸಾರ್ವಜನಿಕ ಕಾಮಗಾರಿ ಸ್ಥಾಯಿ ಸಮಿತಿಯ ಮುಂದೆ ಮಂಡಿಸಲಾದ ಟಿಪ್ಪಣಿ.

(1)ವಾರ್ಡ್ ಸಂಖ್ಯೆ:05, ಜಕ್ಕೂರ್ ವಾರ್ಡ್ (ಬ್ಯಾಟರಾಯನಪುರ ವಿಭಾಗ) ರಲ್ಲಿ ಮೇಲ್ಕಾಣಿಸಿದಂತೆ ಪ್ರಸ್ತಾಪಿಸಿದ ಕಾಮಗಾರಿಯ ಅಂದಾಜು ಮೊತ್ತವಾದ ರೂ.30.00 ಲಕ್ಷಗಳ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಮೆ॥ಕೆ.ಆರ್.ಐ.ಡಿ.ಎಲ್ ಸಂಸ್ಥೆಗೆ ವಹಿಸಿ ಕಾಮಗಾರಿಯ ಪೂರ್ಣಗೊಳಿಸಿರುವ ಕ್ರಮವನ್ನು ಸ್ಥಿರೀಕರಿಸಲು ಕೋರಿದೆ.

ಪ್ರಧಾನ ಅಭಿಯಂತರರು (ಪ್ರಭಾರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ವಿಶೇಷ ಆಯುಕ್ತರು (ಯೋಜನೆ) ರವರ ಕಛೇರಿ, ಪಾಲಿಕೆಯ ಮುಖ್ಯ ಕಛೇರಿಗಳು,ನಗರಂಪಾಡಿ ಗೇಟ್, ಬೆಂಗಳೂರು-560 002.

ಸಂಖ್ಯೆ: ವಿ.ಆ(ಯೋ)/ಪಿಆರ್/156ಇ/18-19

ದಿನಾಂಕ: 20-09-2018

ಮುಖ್ಯ ಅಭಿಯಂತರರು
(ಪೂರ್ವ, ಪಶ್ಚಿಮ, ದಕ್ಷಿಣ, ಬೊಮ್ಮನಹಳ್ಳಿ, ಮಹದೇವಪುರ, ರಾಜರಾಜೇಶ್ವರಿನಗರ, ದಾಸರಹಳ್ಳಿ, ಯಲಹಂಕ, ರಸ್ತೆ ಮೂಲಭೂತ ಸೌಕರ್ಯ)

ಆಂತರಿಕ ಕಛೇರಿ ಟಿಪ್ಪಣಿ

ವಿಷಯ:- ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಎಲ್ಲಾ 198 ವಾರ್ಡ್‌ಗಳಲ್ಲಿ ಹಾಲಿ ಇರುವ ಮತ್ತು ಹೊಸದಾಗಿ ಗುರುತಿಸಿರುವ ರಸ್ತೆ ಗುಂಡಿಗಳನ್ನು ಸಂಪೂರ್ಣವಾಗಿ ಮುಚ್ಚಿ ಹಾಗೂ ವರದಿಯನ್ನು ಕಡ್ಡಾಯವಾಗಿ ಸಲ್ಲಿಸುವ ಬಗ್ಗೆ.

ಉಲ್ಲೇಖ:- ಘನ ಉಚ್ಚ ನ್ಯಾಯಾಲಯದಲ್ಲಿ ದಿ:19-09-2018 ಮತ್ತು 20-09-2018 ರಂದು ಪಿಐಎಲ್ ದೂರಿನ ಸಂಬಂಧ ವಿಚಾರಣೆ ಮತ್ತು ಆದೇಶ ನೀಡಿರುವುದು.

* * * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಪೂರ್ವ, ಪಶ್ಚಿಮ, ದಕ್ಷಿಣ, ಬೊಮ್ಮನಹಳ್ಳಿ, ಮಹದೇವಪುರ, ರಾಜರಾಜೇಶ್ವರಿನಗರ, ದಾಸರಹಳ್ಳಿ ಮತ್ತು ಯಲಹಂಕ ವಲಯಗಳಲ್ಲಿ ರಸ್ತೆ ಮೂಲಭೂತ ಸೌಕರ್ಯ ಶಾಖೆ ಮತ್ತು 08 ವಲಯಗಳಲ್ಲಿ ರಸ್ತೆ ಗುಂಡಿಗಳು ಆಗಿರುವುದನ್ನು ಗಮನಿಸಲಾಗಿದ್ದು, ಪಾಲಿಕೆಯು ನಿಗಧಿತ ಅವಧಿಯಲ್ಲಿ ಕಾಲಕಾಲಕ್ಕೆ ಎಲ್ಲಾ ರಸ್ತೆ ಗುಂಡಿಗಳನ್ನು ಮುಚ್ಚದೇ ಇರುವ ಕಾರಣದಿಂದ ಘನ ಉಚ್ಚ ನ್ಯಾಯಾಲಯದಲ್ಲಿ WP PIL No:42927/2015 ದಾಖಲಾಗಿದ್ದು, ದಿ:19-09-2018 ಮತ್ತು 20-09-2018 ರಂದು ಸುಧೀರ್ಘವಾಗಿ ವಿಚಾರಣೆ ನಡೆದ್ದಿದ್ದು ಅಂತಿಮವಾಗಿ ಘನ ನ್ಯಾಯಾಲಯವು ಎಲ್ಲಾ 198 ವಾರ್ಡ್‌ಗಳಲ್ಲಿ ಹಾಲಿ ಇರುವ ಮತ್ತು ಹೊಸದಾಗಿ ಗುರುತಿಸಿರುವ ರಸ್ತೆ ಗುಂಡಿಗಳನ್ನು ಸಂಪೂರ್ಣವಾಗಿ ಮುಚ್ಚಲು ತುರ್ತು ಕ್ರಮಗಳನ್ನು ಹಗಲು – ರಾತ್ರಿ ಕೆಲಸಗಳನ್ನು ಕೈಗೊಂಡು, ನಿಯಮಾನುಸಾರವಾಗಿ ದಿನವಹಿ ಕಾಮಗಾರಿ ನಿರ್ವಹಿಸುವ ಮುಂಚೆ ಪ್ರತಿ ಗುಂಡಿಯ ಅಳತೆಗಳನ್ನು ಅಳತೆ ಪುಸ್ತಕದಲ್ಲಿ ದಾಖಲಿಸಿ ಸಹಾಯಕ ಕಾರ್ಯಪಾಲಕ ಅಭಿಯಂತರರು ರವರಿಂದ ದೃಢೀರಿಸಿಕೊಂಡು ಕಾಮಗಾರಿಯನ್ನು ಪ್ರಾರಂಭಿಸಿ, ಈ ಕಾರ್ಯದ ಪ್ರಾರಂಭ ಹಾಗೂ ಪೂರ್ಣಗೊಂಡ ಛಾಯಾಚಿತ್ರಗಳನ್ನು ಸಹ ಗುಂಡಿವಾರು ದಾಖಲೆಯನ್ನು ಪೂರ್ಣಗೊಳಿಸಲು ಮತ್ತು ದಿ:24-09-2018 ರಂದು ನಡೆಯುವ ವಿಚಾರಣೆಯಲ್ಲಿ ಎಲ್ಲಾ ರಸ್ತೆ ಗುಂಡಿಗಳನ್ನು ಮುಚ್ಚಿರುವುದು ಹಾಗೂ ಶೂನ್ಯವೆಂದು ಪ್ರಮಾಣಪತ್ರ ಸಲ್ಲಿಸಲು ಆದೇಶಿಸಿದೆ.

ಈ ವಿಚಾರದಲ್ಲಿ ತಮ್ಮ ವ್ಯಾಪ್ತಿಗೆ ಬರುವ ರಸ್ತೆಗಳಲ್ಲಿ ಹಾಲಿ ಇರುವ ಮತ್ತು ಹೊಸದಾಗಿ ಗುರುತಿಸಿರುವ ರಸ್ತೆ ಗುಂಡಿಗಳನ್ನು ಸಂಪೂರ್ಣವಾಗಿ ಮುಚ್ಚಿ ಈ ಕಛೇರಿಗೆ ವಿಚಾರಣೆ ಆಗುವ ಮುನ್ನವೇ ಯಾವುದೇ ಮುಚ್ಚುವ ಕಾರ್ಯವು ಬಾಕಿ ಇರುವುದಿಲ್ಲವೆಂದು ಪತ್ರವನ್ನು ಈ ಕಛೇರಿಗೆ ಸಲ್ಲಿಸಲು ಹಾಗೂ ಸೂಚಿಸಿರುವ ಕಾರ್ಯಗಳಲ್ಲಿ ವ್ಯತ್ಯಾಸವಾದಲ್ಲಿ ನಿಯಮಾನುಸಾರವಾಗಿ ಶಿಸ್ತಿನ ಕ್ರಮವನ್ನು ಕೈಗೊಳ್ಳಲಾಗುವುದು ಎಂದು ಆದೇಶಿಸಿರುತ್ತಾರೆ.

ವಿಶೇಷ ಆಯುಕ್ತರು (ಯೋಜನೆ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು:
1. ಮಾನ್ಯ ಆಯುಕ್ತರು ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಪ್ರಧಾನ ಅಭಿಯಂತರರು ರವರ ಮಾಹಿತಿಗಾಗಿ.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ವಾರ್ಡ್ ಮಟ್ಟದ ಸಾರ್ವಜನಿಕ ಕಾಮಗಾರಿ ಸ್ಥಾಯಿ ಸಮಿತಿಯ, ದಿನಾಂಕ: 03-01-2018ರ ನಡವಳಿಗಳು

ವಿಷಯದ ಸಂಖ್ಯೆ: ವಾಕಾಸ್ಥಾಸ/690/2017-18

ಟಿಪ್ಪಣಿಯಲ್ಲಿ ವಿವರಿಸಿರುವಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯವ್ಯಯವನ್ನು ಸರ್ಕಾರವು ಆದೇಶ ಸಂಖ್ಯೆ:ನಅಇ 294 ಎಂಎನ್.ಯು 2017, ದಿನಾಂಕ:24-05-2017ರ ಆದೇಶದಲ್ಲಿ ಅನುಮೋದನೆ ನೀಡಿದ್ದು, ಈ ಆಯವ್ಯಯದ ಪುಟ ಸಂಖ್ಯೆ: 104 ರಲ್ಲಿ ಲೆಕ್ಕ ಶೀರ್ಷಿಕೆ ಪಿ-1771 ರಲ್ಲಿ ವಲಯ ಕಾಮಗಾರಿ ವಾರ್ಡ್‌ವಾರು ನಿರ್ವಹಣೆ ಹಳೆ ವಾರ್ಡ್‌ಗೆ ಒಂದಕ್ಕೆ ರೂ:2.00 ಕೋಟಿ ಮತ್ತು ಹೊಸ ವಾರ್ಡ್ ಒಂದಕ್ಕೆ ರೂ:3.00ಕೋಟಿ ಗಳಿಗೆ ಅನುವು ಮಾಡಿ ಅನುಮೋದನೆ ನೀಡಲಾಗಿರುತ್ತದೆ. ಈ ಸಂಬಂಧ ಮುಖ್ಯ ಅಭಿಯಂತರರು (ಯಲಹಂಕ) ರವರು ವಾರ್ಡ್-05 ಮತ್ತು 06 ಕ್ಕೆ ತಲಾ ರೂ:300.00 ಲಕ್ಷಗಳಿಗೆ ಕ್ರಿಯಾ ಯೋಜನೆಯನ್ನು ತಯಾರಿಸಿದ್ದು, ವಿವರಗಳನ್ನು ಈ ಕೆಳಕಂಡಂತೆ ಸಲ್ಲಿಸಿರುತ್ತಾರೆ.

ಕ್ರ.ಸ	ವಲಯ ವಿಭಾಗ	ವಾರ್ಡ್ ಸಂಖ್ಯೆ:	ಅಂದಾಜು ಮೊತ್ತ ರೂ ಲಕ್ಷಗಳಲ್ಲಿ
1	ಯಲಹಂಕ ವಲಯಕ್ಕೆ ಸೇರಿರುವ ಯಲಹಂಕ ವಿಭಾಗದಲ್ಲಿ 2017-18ನೇ ಸಾಲಿನಲ್ಲಿ ಲೆಕ್ಕಶೀರ್ಷಿಕೆ ಪಿ-1771ರ ಅಡಿಯಲ್ಲಿ ಕ್ರಿಯಾ ಯೋಜನೆಯಲ್ಲಿರುವ 19 ಕೆಲಸಗಳಿಗೆ ಅನಮೋದಿಸುವ ಬಗ್ಗೆ.	05	300.00
2	ಯಲಹಂಕ ವಲಯಕ್ಕೆ ಸೇರಿರುವ ಯಲಹಂಕ ವಿಭಾಗದಲ್ಲಿ 2017-18ನೇ ಸಾಲಿನಲ್ಲಿ ಲೆಕ್ಕಶೀರ್ಷಿಕೆ ಪಿ-1771ರ ಅಡಿಯಲ್ಲಿ ಕ್ರಿಯಾ ಯೋಜನೆಯಲ್ಲಿರುವ 16 ಕೆಲಸಗಳಿಗೆ ಅನಮೋದಿಸುವ ಬಗ್ಗೆ.	06	300.00

ಈ ಹಿನ್ನಲೆಯಲ್ಲಿ ವಿಶೇಷ ಆಯುಕ್ತರು (ಯೋಜನೆ) ರವರ ಶಿಫಾರಸ್ಸಿನಂತೆ ಹಾಗೂ ಮಾನ್ಯ ಆಯುಕ್ತರವರ ಆದೇಶದಂತೆ, ವಾರ್ಡ್-05 ಮತ್ತು 06 ಕ್ಕೆ ಕ್ರಿಯಾ ಯೋಜನೆಯ ಕಾಮಗಾರಿಗಳಿಗೆ ಪ್ರತಿ ವಾರ್ಡ್‌ಗೆ ಮೊತ್ತ ರೂ:300.00 ಲಕ್ಷಗಳಿಗೆ ಅನುಮೋದನೆ ಕೋರಿ ವಾರ್ಡ್ ಮಟ್ಟದ ಸಾರ್ವಜನಿಕ ಕಾಮಗಾರಿ ಸ್ಥಾಯಿ ಸಮಿತಿ ಮುಂದೆ ಮಂಡಿಸಲು ಮಾನ್ಯ ಆಯುಕ್ತರು ಸಂಖ್ಯೆ:ಪಿ.ಎಸ್.ಆರ್(ಜಿ)6464/2017-18 ದಿ:19-12-2017 ರಂತೆ ಅನುಮೋದಿಸಿರುವ ಮೇರೆಗೆ ಪ್ರಧಾನ ಅಭಿಯಂತರರ ಕಛೇರಿ ಸಂಖ್ಯೆ:9215/2017-18, ದಿನಾಂಕ:22-12-2017 ರಂತೆ ವಾರ್ಡ್ ಮಟ್ಟದ ಸಾರ್ವಜನಿಕ ಕಾಮಗಾರಿ ಸ್ಥಾಯಿ ಸಮಿತಿ ಮುಂದೆ ಮಂಡಿಸಿರುವ ಪ್ರಧಾನ ಅಭಿಯಂತರರು ರವರ ದಿನಾಂಕ:22-12-2017ರ ಟಿಪ್ಪಣಿ.

ನಿರ್ಣಯ:- ಪ್ರಧಾನ ಅಭಿಯಂತರರು ರವರ ದಿನಾಂಕ:22-12-2017ರ ಟಿಪ್ಪಣಿಯನ್ನು ಈ ಕೆಳಕಂಡ ಷರತ್ತುಗಳೊಂದಿಗೆ ಒಪ್ಪಲು ಸಮಿತಿಯು ತೀರ್ಮಾನಿಸಿತು.

1. 2017-18ನೇ ಸಾಲಿನ ಆಯವ್ಯಯದ ಲೆಕ್ಕ ಶೀರ್ಷಿಕೆ:-1771ರ ಅಡಿಯಲ್ಲಿ ಮೀಸಲು ಇಟ್ಟಿರುವ ಅನುದಾನದಲ್ಲಿ ಸ್ಥಳೀಯ ಪಾಲಿಕೆ ಸದಸ್ಯರ ಒಪ್ಪಿಗೆಯೊಂದಿಗೆ ತಯಾರಿಸಿರುವ ವಾರ್ಷಿಕ ಕ್ರಿಯಾ ಯೋಜನೆಯಲ್ಲಿ ವಾರ್ಡ್ ಮಟ್ಟದ ಸಾರ್ವಜನಿಕ ಕಾಮಗಾರಿ ಸ್ಥಾಯಿ ಸಮಿತಿ ಅಧ್ಯಕ್ಷರ ಸಹಿ ಇರುವ ಪಟ್ಟಿಗೆ ಜಾಬ್ ಸಂಖ್ಯೆ ನೀಡುವುದು.

-/-

ಆಯುಕ್ತರು ಮತ್ತು ಅಭಿಯಂತರರಿಂದ ಪಡೆದು ನಂತರ ಕಾರ್ಯ ನಿರ್ವಹಿಸುವುದು.

3. ಸದರಿ ಕ್ರಿಯಾ ಯೋಜನೆ ಪಟ್ಟಿಯಲ್ಲಿರುವ ಕಾಮಗಾರಿಗಳನ್ನು ನಿಗದಿತ ಅವಧಿಯಲ್ಲಿ ಆಯಾ ಸಾಲಿನಲ್ಲಿಯೇ ಪೂರ್ಣಗೊಳಿಸಬೇಕಾಗಿರುವುದರಿಂದ ಕೂಡಲೇ ಟೆಂಡರ್ ಕರೆದು ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು.
4. ಆಯವ್ಯಯದಲ್ಲಿ ಮೀಸಲಿಟ್ಟಿರುವ ಇತರೆ ಸಂಚಿತ ಅನುದಾನ (Lumsum Grants) ಗಳಿಗೆ ಸಂಬಂಧಿಸಿದಂತೆ ಇಲಾಖಾ ಮುಖ್ಯಸ್ಥರು ಕ್ರಿಯಾ ಯೋಜನೆಯನ್ನು ತಯಾರಿಸಿ ವಾರ್ಡ್ ಮಟ್ಟದ ಸಾರ್ವಜನಿಕ ಕಾಮಗಾರಿ ಸ್ಥಾಯಿ ಸಮಿತಿಯ ಅನುಮೋದನೆಗೆ ಮಂಡಿಸುವುದು.

ಕ್ರ ಸಂ	ಶ್ರೀಯುತರ ಹೆಸರು	ಪದನಾಮ	ನಿರ್ಣಯದ ಪರವಾಗಿ ಸಹಿ
1	ಇಮ್ರಾನ್ ಪಾಷ	ಅಧ್ಯಕ್ಷರು	
2	ಎಸ್.ಪಿ.ಹೇಮಲತಾ	ಸದಸ್ಯರು	
3	ದೀಪ ನಾಗೇಶ್	ಸದಸ್ಯರು	Deepanagesh
4	ಶ್ವೇತ ವಿಜಯಕುಮಾರ್	ಸದಸ್ಯರು	Swetha
5	ಹೇಮಲತಾ ಸತೀಶ್. ಶೇಟ್	ಸದಸ್ಯರು	Hshet
6	ಯಶೋಧ ಲಕ್ಷ್ಮೀಕಾಂತ	ಸದಸ್ಯರು	Yashoda. L
7	ನೇತ್ರಾ ಪಲ್ಲವಿ.ಎಂ.	ಸದಸ್ಯರು	Nethrapallavi.M
8	ಹಾ.ನಾ.ಭುವನೇಶ್ವರಿ (ಭುವನ)	ಸದಸ್ಯರು	Bhuvana
9	ಸುಜಾತ. ಡಿ.ಸಿ.ರಮೇಶ್	ಸದಸ್ಯರು	Sujatha
10	ಮಂಜುಳ	ಸದಸ್ಯರು	ಮಂಜುಳ
11	ಎಸ್.ಜಿ. ನಾಗರಾಜ್	ಸದಸ್ಯರು	